2

# ಶಿರಸಿ: ಯಕ್ಷ ಶಾಲ್ಮಲಾ ಸಂಸ್ಥೆಗೆ 'ವಿಶ್ವೇಶತೀರ್ಥ ಪ್ರಶಸ್ತಿ'

ಶಿರಸಿ: ಯಕ್ಷಗಾನ, ತಾಳಮದ್ದಲೆಯ ಕ್ಷೇತ್ರದ ಉಳಿವಿಗೆ ಶ್ರಮಿಸುತ್ತಿರುವ ಸ್ವರ್ಣವಲ್ಲೀ ಮಹಾ ಸಂಸ್ಥಾನದ ಯಕ್ಷ ಶಾಲ್ಮಲಾ ಸಂಸ್ಥೆಗೆ ಉಡುಪಿಯ ಯಕ್ಷಗಾನ ಕಲಾರಂಗ ನೀಡುವ ಪ್ರತಿಷ್ಠಿತ ವಿಶ್ವೇಶತೀರ್ಥ ಪ್ರಶಸ್ತಿ ಪ್ರಕಟವಾಗಿದೆ.

ನ.18ರಂದು ಕಟೀಲು ದುರ್ಗಾಪರಮೇಶ್ವರಿ ಕ್ಷೇತ್ರದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಸ್ವರ್ಣವಲ್ಲೀಯ ಯಕ್ಷಶಾಲ್ಮಲಾ ಸಂಸ್ಥೆಯು ಯಕ್ಷಗಾನ ಲೋಕದಲ್ಲಿ ಉಳಿದ ಸಂಸ್ಥೆಗಳಿಗೆ ಮಾದರಿಯಾಗುವಂಥ ಕೆಲಸ ಮಾಡುತ್ತಿದ್ದು, ಪ್ರತಿ ವರ್ಷ ಯಕ್ಷೋತ್ಸವ, ಮಕ್ಕಳ ತಾಳಮದ್ದಲೆ ಸ್ಪರ್ಧೆ ಕೂಡ ನಡೆಸುತ್ತಿದೆ.

ಕಲಾರಂಗವು ಈ ವರ್ಷ ಸಂಸ್ಥೆಗೆ ನೀಡುವ ವಿಶ್ವೇಶ್ವರ ತೀರ್ಥ ಪ್ರಶಸ್ತಿಗೆ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಗೌರವಾಧ್ಯಕ್ಷತೆಯಲ್ಲಿ ನಡೆಯುತ್ತಿರುವ ಸ್ವರ್ಣವಲ್ಲೀ ಮಠದ ಅಂಗ ಸಂಸ್ಥೆಗಳಲ್ಲಿ ಒಂದಾದ ಯಕ್ಷ ಶಾಲ್ಮಲಾ ಆಯ್ಕೆ ಆಗಿದೆ ಎಂದು ಯಕ್ಷ ಶಾಲ್ಮಲಾ ಕಾರ್ಯದರ್ಶಿ ನಾಗರಾಜ ಜೋಶಿ ಸೋಂದಾ ತಿಳಿಸಿದ್ದಾರೆ.